ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**<u>ಸಿ.ಸಿ. ಸಂಖ್ಯೆ: 35/2025</u>**

ಪ್ರ.ವ.ಬೋ.ತಾಃ 24-07-2026

ಚಾಸಾಃ 1 ಫ್ರಾಸಾಃ 1

| | |
|---|---|
| ಸಾಕ್ಷಿಯ ಹೆಸರು | ನಾಗೇಶ್.ಆರ್. |
| ತಂದೆ/ಗಂಡನ ಹೆಸರು | ರಾಮಪ್ಪ |
| ವಯಸ್ಸು | 36 ವರ್ಷ |
| ವೃತ್ತಿ | ಪೈಂಟಿಂಗ್ ಕೆಲಸ |
| ವಾಸ | ಕಸಿನಾಯಕನಹಳ್ಳಿ, ಮಧುಗಿರಿ ತಾ. |

**<u>ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-</u>**

ನನಗೆ ಆರೋಪಿತರು ಗೊತ್ತು. ಚಾಸಾ.2 ನನ್ನ ಅತ್ತಿಗೆ, ಚಾಸಾ.3 ನನ್ನ ತಂಗಿ, ಚಾಸಾ.4 ನನ್ನ ಅಕ್ಕ, ಚಾಸಾ.5 ನನ್ನ ತಮ್ಮ, ಚಾಸಾ.6 ನನ್ನ ಅಣ್ಣ. ಆರೋಪಿತರು ಎಂದೂ ಸಹ ಅಪರಾಧ ಎಸಗುವ ಸಮಾನ ಉದ್ದೇಶದಿಂದ ಚಾಸಾ.2 ರವರ ಮನೆಗೆ ಅಕ್ರಮ ಪ್ರವೇಶ ಮಾಡಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿಲ್ಲ, ನನಗಾಗಲೀ, ಚಾಸಾ.2 ರಿಂದ 5 ರವರಿಗಾಗಲೀ ಕೈಗಳಿಂದ, ದೊಣ್ಣೆಯಿಂದ ಹಲ್ಲೆ ಮಾಡಿ, ಸಾಮಾನ್ಯ ಹಾಗೂ ತೀವ್ರ ಸ್ವರೂಪದ ಗಾಯಪಡಿಸಿರುವುದಿಲ್ಲ ಹಾಗೂ ಜೀವ ಬೆದರಿಕೆ ಹಾಕಿರುವುದಿಲ್ಲ. ಅಲ್ಲದೇ ಚಾಸಾ.2 ರವರ ಮನೆಯ ಕಿಟಕಿ ಗಾಜುಗಳನ್ನು ಹೊಡೆದು ಹಾಕಿ ಯಾವುದೇ ನಷ್ಟ ಉಂಟು ಮಾಡಿರುವುದಿಲ್ಲ. ಈ ಸಂಬಂಧವಾಗಿ ನಾನಾಗಲೀ ಅಥವಾ ಚಾಸಾ.2 ರಿಂದ 5 ರವರಾಗಲೀ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಿಲ್ಲ. ಈಗ ತೋರುತ್ತಿರುವ

ದೂರಿನಲ್ಲಿರುವ ಸಹಿ ನನ್ನದಾಗಿರುತ್ತದೆ. ಆ ದೂರನ್ನು ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಈಗ ತೋರುತ್ತಿರುವ ಸ್ಥಳ ಪಂಚನಾಮೆಯಲ್ಲಿರುವ ಸಹಿ ನನ್ನದಾಗಿರುತ್ತದೆ. ಅದನ್ನು ನಿಪಿ.2 ಎಂದು, ಸಾಕ್ಷಿಯ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು. ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಆ ಸಮಯದಲ್ಲಿ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನ್ಯಾಯಾಲಯದ ಮುಂದಿರುವ ಇಟ್ಟಿಗೆ ಚೂರು, ಗಾಜಿನ ಚೂರು ಮತ್ತು ದೊಣ್ಣೆಗಳನ್ನು ಯಾವ ಉದ್ದೇಶಕ್ಕಾಗಿ ಅಮಾನತ್ತುಪಡಿಸಿಕೊಂಡರು ಎಂಬುದು ನನಗೆ ಗೊತ್ತಿಲ್ಲ. ಈಗ ತೋರುತ್ತಿರುವ ಫೋಟೋದಲ್ಲಿರುವ ವ್ಯಕ್ತಿ ನಾನೇ ಆಗಿರುತ್ತೇನೆ. ಅದನ್ನು ನಿಪಿ.3 ಎಂದು ಗುರುತಿಸಲಾಯಿತು. ಆ ಫೋಟೋವನ್ನು ಯಾವ ಉದ್ದೇಶಕ್ಕಾಗಿ ತೆಗೆದರು ಎಂಬುದು ನನಗೆ ಗೊತ್ತಿಲ್ಲ. ಈ ಸಂಬಂಧವಾಗಿ ನಾನು ಪೊಲೀಸರ ಮುಂದೆ ಯಾವುದೇ ಮರು ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**<u>ಪಾಟೀ ಸವಾಲುಃ</u>- ಮಾನ್ಯ ಸ.ಸ.ಅ. ರವರಿಂದಃ-**

ದಿಃ 15.12.2024 ರಂದು ಸಂಜೆ 4.00 ಗಂಟೆ ಸಮಯದಲ್ಲಿ ಆರೋಪಿತರು ಅಪರಾಧ ಎಸಗುವ ಸಮಾನ ಉದ್ದೇಶದಿಂದ ನಾನು ಹಾಗೂ ಚಾಸಾ.2 ರಿಂದ 6 ರವರು ಮಾತನಾಡುತ್ತಾ ಕುಳಿತಿದ್ದಾಗ, ಆರೋಪಿತರು ಹಳೆಯ ದ್ವೇಷದ ಹಿನ್ನೆಲೆಯಲ್ಲಿ

ಚಾಸಾ.2 ರವರ ಮನೆಗೆ ಅಕ್ರಮ ಪ್ರವೇಶ ಮಾಡಿ ನನ್ನ ಹಾಗೂ ಚಾಸಾ2 ರಿಂದ 6 ರವರನ್ನು ಅವಾಚ್ಯ ಶಬ್ದಗಳಿಂದ ಬೈದು, 1 ನೇ ಆರೋಪಿ ಚಾಸಾ.2 ರವರಿಗೆ ಕಾಲಿನಿಂದ ಹೊಟ್ಟೆಗೆ ಒದ್ದು, ಕೈ ಹಿಡಿದು ಎಳೆದಾಡಿ, ಚಾಸಾ.2 ರವರಿಗೆ ತಲೆಗೆ ಹೊಡೆದು ನೋವುಂಟುಪಡಿಸಿ, 2 ನೇ ಆರೋಪಿ ದೊಣ್ಣೆಯಿಂದ ಚಾಸಾ.3 ರವರ ತಲೆಗೆ ಹೊಡೆದು, 4 ನೇ ಆರೋಪಿ ಚಾಸಾ.4 ರವರಿಗೆ ದೊಣ್ಣೆಯಿಂದ ತಲೆಗೆ, ಎಡಗೈ, ಹಾಗೂ ಎಡಗಾಲಿನ ತೊಡೆಗೆ ಹೊಡೆದು, 1 ನೇ ಆರೋಪಿ ದೊಣ್ಣೆಯಿಂದ ನನ್ನ ತಲೆಗೆ ಮತ್ತು ಎಡ ಮೊಣಕೈಗೆ ಹೊಡೆದು, 3 ನೇ ಆರೋಪಿ ಅದೇ ದೊಣ್ಣೆಯಿಂದ ಚಾಸಾ.5 ರವರ ತಲೆಗೆ ಹೊಡೆದು ಸಾಮಾನ್ಯ ಹಾಗೂ ತೀವ್ರ ಸ್ವರೂಪದ ಗಾಯವನ್ನುಂಟುಪಡಿಸಿ, ಚಾಸಾ.2 ರವರ ಮನೆಯ ಕಿಟಕಿ ಗಾಜುಗಳನ್ನು ಹೊಡೆದು ಸುಮಾರು ಒಂದು ಸಾವಿರ ನಷ್ಟಪಡಿಸಿದ್ದು, ಆರೋಪಿತರೆಲ್ಲರೂ ನನಗೆ, ಚಾಸಾ.2 ರಿಂದ 6 ರವರಿಗೆ ಜೀವ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಈ ಸಂಬಂಧವಾಗಿ ನಾನು, ಚಾಸಾ.2 ರಿಂದ 5 ರವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದೆವು ಎಂದರೆ ಸರಿಯಲ್ಲ. ಈ ಘಟನೆಯ ಸಂಬಂಧ ನಾನು ನಿಪಿ.1 ರಂತಹ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ನಾನು ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ದಿಃ 16.12.2024 ರಂದು ಬೆಳಗ್ಗೆ 10.00 ರಿಂದ 11.00 ಗಂಟೆ ಸಮಯದಲ್ಲಿ ಘಟನಾ ಸ್ಥಳಕ್ಕೆ ಭೇಟಿ ನೀಡಿ ನಾನು ಸ್ಥಳ ತೋರಿಸಿದ ಮೇರೆಗೆ ಚಾಸಾ.9 ಮತ್ತು ಚಾಸಾ.10 ರವರ ಸಮಕ್ಷಮ ಸ್ಥಳ ಪಂಚನಾಮೆ ಮಾಡಿ, ಆ ಸಮಯದಲ್ಲಿ ನ್ಯಾಯಾಲಯದ ಮುಂದಿರುವ ಎರಡು ಇಟ್ಟಿಗೆ ಚೂರುಗಳು, ಎರಡು ಗಾಜಿನ ಚೂರುಗಳು ಹಾಗೂ ಎರಡು ದೊಣ್ಣೆಗಳನ್ನು

ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ.3 ರಂತಹ ಫೋಟೋ ತೆಗೆದರು ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೊಲೀಸರ ಮುಂದೆ ಮರು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಆ ಅಲ್ಲಗೆಳೆದ ಮರು ಹೇಳಿಕೆಯನ್ನು ನಿಪಿ.4 ಎಂದು ಗುರುತಿಸಲಾಯಿತು. ನಾನು, ಚಾಸಾ.2 ರಿಂದ 6 ಹಾಗೂ ಆರೋಪಿತರು ನ್ಯಾಯಾಲಯದ ಹೊರಗೆ ರಾಜೀ ಆಗಿದ್ದೇವೆ ಎಂದರೆ ಸರಿ. ಆ ಕಾರಣಕ್ಕಾಗಿ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ– ಆರೋಪಿತರ ಪರ ವಕೀಲರಿಂದಃ**– ಏನೂ ಇಲ್ಲ.

ಮರು ವಿಚಾರಣೆಃ– ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ